# Bangalore
# Regional News
# 21.02.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿಯಿರುವ ಸುಮಾರು ೨ ಲಕ್ಷ ಹುದ್ದೆಗಳಿಗೆ ಹಂತ ಹಂತವಾಗಿ ನೇಮಕಾತಿ - ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

೨. ಬಜೆಟ್‌ನಲ್ಲಿ ವಿಶೇಷ ಚೇತನರಿಗೆ ಹೊಸ ಯೋಜನೆಗಾಗಿ ಪ್ರಸ್ತಾಪ ಸಲ್ಲಿಕೆ - ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

೩. ಮನ್ ಕಿ ಬಾತ್‌ನಲ್ಲಿ ನಾಳೆ ದೇಶ-ವಿದೇಶದ ಭಾರತೀಯರನ್ನು ಉದ್ದೇಶಿಸಿ ಪ್ರಧಾನಿ ಮನದ ಮಾತು

೪. ಪರಿಸರ ನಿಯಮ ಪಾಲಿಸದ ಕೈಗಾರಿಕೆ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ - ರಾಜ್ಯ ಮಾಲಿನ್ಯ ನಿಯಂತ್ರಣಾ ಮಂಡಳಿ ಅಧ್ಯಕ್ಷ ನರೇಂದ್ರ ಸ್ವಾಮಿ ಎಚ್ಚರಿಕೆ

**<><*<><>*><>**

ಸರ್ಕಾರದ ವಿವಿಧ ಇಲಾಖೆಗಳಲ್ಲಿ ಎರಡೂವರೆ ಲಕ್ಷಕ್ಕೂ ಹೆಚ್ಚು ಹುದ್ದೆಗಳು ಖಾಲಿಯಿದ್ದು, ಇವುಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಅವರು ಬೆಂಗಳೂರಿನಲ್ಲಿಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿಸಲಾಗಿದ್ದ ಅಭಯ ಹಸ್ತ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಸಮಾಜದ ಸ್ವಾಸ್ಥ್ಯವನ್ನು ಕಾಪಾಡುವ ಆರೋಗ್ಯ, ಶಿಕ್ಷಣ, ಪೊಲೀಸ್ ಮೊದಲಾದ ಇಲಾಖೆಗಳಲ್ಲಿನ ಹುದ್ದೆ ಭರ್ತಿಗೆ ಸರ್ಕಾರ ಆದ್ಯತೆ ನೀಡುತ್ತಿದೆ ಎಂದರು. ಎಲ್ಲಾ ನೇಮಕಾತಿಗಳನ್ನು ಕೌನ್ಸಿಲಿಂಗ್ ಮೂಲಕ ಮಾಡುತ್ತಿದ್ದು, ಭ್ರಷ್ಟಾಚಾರ ತಡೆಯಲು ಸಾಧ್ಯವಾಗುತ್ತಿದೆ. ವೈದ್ಯರು ಸೇರಿದಂತೆ ಸುಮಾರು ೫ ಸಾವಿರದ ೭೦೦ ಹುದ್ದೆಗಳನ್ನು ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡಲಾಗಿದೆ ಎಂದರು. ಸಮಾರಂಭದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ವೃಂದದ ನೇಮಕಾತಿ ಆದೇಶಗಳನ್ನು ಮುಖ್ಯಮಂತ್ರಿ ವಿತರಿಸಿದರು. ಒಂದು ಸಾವಿರ ಅಭ್ಯರ್ಥಿಗಳು ಇಂದು ನೇಮಕಾತಿ ಆದೇಶಗಳನ್ನು ಪಡೆದು ಆರೋಗ್ಯ ಇಲಾಖೆಗೆ ಸೇರ್ಪಡೆಯಾಗಿರುವುದು ಸಂತಸದ ವಿಷಯ. ಇದು ಕೇವಲ ವೃತ್ತಿಯಾಗಿರದೇ ಜೀವ ಉಳಿಸುವ ಹಾಗೂ ರೋಗ ತಡೆಯುವ ಸಾರ್ಥಕ ಕಾರ್ಯಗಳನ್ನು ಒಳಗೊಂಡಿದೆ ಎಂದು ಅವರು ಹೇಳಿದರು.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ನಾಳೆ ಉತ್ತರ ಕನ್ನಡ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದು, ಹಲವು ಅಭಿವೃದ್ಧಿ ಕಾರ್ಯಕ್ರಮಗಳಿಗೆ ಚಾಲನೆ ನೀಡಲಿದ್ದಾರೆ. ನಾಳೆ ಬೆಳಗ್ಗೆ ಅಂಕೋಲಾದ ಮಂಜುಗುಣಿಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಗಂಗಾವಳಿ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬಳಿಕ ಅವರು, ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆವರಣದಲ್ಲಿ ನಿರ್ಮಿಸಿರುವ ೪೫೦ ಹಾಸಿಗೆಗಳ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡ, ಖಾನಾಪುರ-ತಾಳಗುಪ್ಪ ರಾಜ್ಯ ಹೆದ್ದಾರಿಯಲ್ಲಿ ಯಲ್ಲಾಪುರ ಬಳಿ ನಿರ್ಮಿಸಲಾಗುತ್ತಿರುವ ಸೇತುವೆ ಕಾಮಗಾರಿ, ಯಲ್ಲಾಪುರದ ನಿರೀಕ್ಷಣಾ ಮಂದಿರದ ಹೊಸ ಕಟ್ಟಡ ಕಾಮಗಾರಿ ಹಾಗೂ ಮುಂಡಗೋಡ ತಾಲೂಕಿನ ಹೊಸ ಪ್ರವಾಸಿ ಮಂದಿರ ಕಾಮಗಾರಿಗಳಿಗೆ ಚಾಲನೆ ನೀಡಲಿದ್ದಾರೆ.

<><*<><>*><>

ಮುಂಬರುವ ಬಜೆಟ್‌ನಲ್ಲಿ ವಿಶೇಷ ಚೇತನರಿಗೆ ಹೊಸ ಯೋಜನೆಗಳನ್ನು ನೀಡುವ ಕುರಿತಂತೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ತಿಳಿಸಿದ್ದಾರೆ. ಬೆಳಗಾವಿಯ ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ವಿಶೇಷ ಚೇತನರ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಚಿವರು, ವಿಶೇಷ ಚೇತನರನ್ನು ಸಮಾಜದ ಮುಖ್ಯವಾಹಿನಿಗೆ ತರುವುದು ಸರ್ಕಾರದ ಮುಖ್ಯ ಉದ್ದೇಶವಾಗಿದೆ ಎಂದರು. ಉದ್ಯೋಗದಲ್ಲಿ ಶೇಕಡಾ ೫ ರಷ್ಟು ಅವಕಾಶ ಹಾಗೂ ಪಿಂಚಣಿ ಸೌಲಭ್ಯ ಕಲ್ಪಿಸುವ ಬಗ್ಗೆ ಮುಖ್ಯಮಂತ್ರಿ ಅವರೊಂದಿಗೆ ಸಮಾಲೋಚಿಸಲಾಗುವುದು. ವಿಶೇಷ ಚೇತನರಿಗೆ ಬೋಧನೆ ಮಾಡುವ ಶಿಕ್ಷಕರ ಜವಾಬ್ದಾರಿ ಗುರುತರವಾಗಿದ್ದು, ಅವರಿಗೂ ಇಲಾಖೆ ವತಿಯಿಂದ ಪ್ರತಿಶತ ೪೦ರಷ್ಟು ವೇತನ ಹೆಚ್ಚಳ ಮಾಡಲಾಗುವುದು ಎಂದು ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಭರವಸೆ ನೀಡಿದರು.

<><*<><>*><>

ವಿಶ್ವೇಶ್ವರಯ್ಯ ನಾಲೆಯ ಅಂತಿಮ ನೆಲೆಯಾದ ತುರಗನೂರು ವಿಸ್ತರಣೆ ಹಾಗೂ ಶಾಖಾ ನಾಲೆಗಳ ಆಧುನೀಕರಣದಿಂದ ಸುಮಾರು ೧ ಸಾವಿರದ ೮೦೦ ಎಕರೆ ಕೃಷಿ ಭೂಮಿಗೆ ನೀರು ಸಿಗಲಿದೆ ಎಂದು ಸಮಾಜ ಕಲ್ಯಾಣ ಹಾಗೂ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ ಮಹದೇವಪ್ಪ ತಿಳಿಸಿದ್ದಾರೆ. ಅವರು ಇಂದು ಟಿ.ನರಸೀಪುರ ತಾಲ್ಲೂಕಿನ ಚಿದರವಳ್ಳಿಯಲ್ಲಿ ೯೧ ಕೋಟಿ ೩೩ ಲಕ್ಷ ರೂಪಾಯಿ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿರುವ ತುರಗನೂರು ವಿಸ್ತರಣೆ, ಉಕ್ಕಲಗೆರೆ ಹಾಗೂ ಹಲವಾರ ಶಾಖಾ ನಾಲೆಗಳ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದರು. ನಂಜಾಪುರ ಏತ ನೀರಾವರಿ ಯೋಜನೆ ಪ್ರಾರಂಭವಾದ ದಿನದಿಂದಲೂ ಇದ್ದ ತೊಡಕನ್ನು ಪ್ರಸಕ್ತ ಸಾಲಿನಲ್ಲಿ ಅಭಿವೃದ್ಧಿ ಪಡಿಸಲು ಹಾಗೂ ಎಲ್ಲಾ ಮೋಟಾರ್‌ಗಳನ್ನು ಹೊಸದಾಗಿ ಅಳವಡಿಸಿ ದುರಸ್ಥಿಪಡಿಸಲು ಸುಮಾರು ೨೦ ಕೋಟಿ ರೂಪಾಯಿ ಅನುದಾನ ಒದಗಿಸಲಾಗುವುದು ಎಂದರು. ತುರಗನೂರು ಅಭಿವೃದ್ದಿ ಕಾಮಗಾರಿಯಿಂದ ಸುಮಾರು ೧೦೦ ಕ್ಯೂಸೆಕ್‌ಗಳಿಗಿಂತ ಅಧಿಕ ಪ್ರಮಾಣದ ನೀರು ಸೋಸಲೆ ಹೋಬಳಿಯ ಗ್ರಾಮಗಳಿಗೆ ಲಭಿಸಲಿದೆ ಎಂದು ಅವರು ಹೇಳಿದರು.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ ’ಮನ್ ಕಿ ಬಾತ್’ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್ ಕಾರ್ಯಕ್ರಮದ ೧೩೧ನೇ ಆವೃತ್ತಿಯಾಗಿದೆ.  ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ.  ಈ ಕಾರ್ಯಕ್ರಮವನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ಚಾನೆಲ್‌ಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಆಯಾ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಪ್ರಸಾರವಾಗಲಿದೆ.

<><*<><>*><>

ಪರಿಸರ ನಿಯಮಗಳನ್ನು ಪಾಲಿಸದ ಕೈಗಾರಿಕೆಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ  ಅಧ್ಯಕ್ಷ ಪಿ.ಎಂ. ನರೇಂದ್ರಸ್ವಾಮಿ ಎಚ್ಚರಿಕೆ ನೀಡಿದ್ದಾರೆ. ಯಾದಗಿರಿ ಜಿಲ್ಲೆಯ ಕಡೇಚೂರು-ಬಾಡಿಯಾಳ ಕೈಗಾರಿಕಾ ಪ್ರದೇಶದಲ್ಲಿರುವ ವಿವಿಧ ಕಂಪನಿಗಳಿಗೆ ಗುರುಮಿಠಕಲ್ ಶಾಸಕ ಶರಣಗೌಡ ಕಂದಕೂರು ಅವರೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ನಂತರ ಅವರು ಮಾತನಾಡಿದರು. ಕೈಗಾರಿಕಾ ಪ್ರದೇಶದ ಕೆಲವು ಕಂಪನಿಗಳ ವಿರುದ್ಧ ದೂರುಗಳು ಬಂದ ಹಿನ್ನೆಲೆಯಲ್ಲಿ ಮಾಹಿತಿ ಸಂಗ್ರಹಿಸಲಾಗಿದೆ. ನಿಯಮಬಾಹಿರವಾಗಿ ಕಾರ್ಯನಿರ್ವಹಿಸುವ ಕಂಪನಿಗಳಿಗೆ ಮೂರು ನೋಟಿಸ್ ನೀಡಲಾಗುವುದು. ಅದಕ್ಕೂ ಸುಧಾರಣೆ ಕಾಣದಿದ್ದರೆ ಜಪ್ತಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಯರ್ತಿಗಾನಹಳ್ಳಿ ಗ್ರಾಮದ ನೂತನ ಶಾಲಾ ಕಟ್ಟಡ ಉದ್ಘಾಟನೆ, ಭುವನಹಳ್ಳಿ ಗ್ರಾಮದಲ್ಲಿ  ಸಮುದಾಯ ಭವನ ಕಾಮಗಾರಿ ಶಂಕುಸ್ಥಾಪನೆ ಹಾಗೂ ಫಲಾನುಭವಿಗಳ ಸೌಲಭ್ಯ ವಿತರಣಾ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಇಂದು ನೆರವೇರಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಾಮ ಪಂಚಾಯಿತಿಗಳಿಗೆ ಬರುವ ಆದಾಯ ಸದ್ಬಳಕೆ ಆಗಬೇಕು. ಪಂಚಾಯಿತಿ ವ್ಯಾಪ್ತಿಯಲ್ಲಿ ಯಾರೊಬ್ಬರೂ ಕೂಡ ಅವಲಂಬಿತ ಜೀವನ ನಡೆಸಬಾರದು, ಬಡವರ, ಹಿಂದುಳಿದವರ ಅಭಿವೃದ್ಧಿ ಆಗಬೇಕು. ಭೂಮಿ ಕಳೆದುಕೊಂಡವರಿಗೆ ವಸತಿ, ಉದ್ಯೋಗ ಕಲ್ಪಿಸುವುದು, ಸ್ವಯಂ ಉದ್ಯೋಗ, ವ್ಯವಹಾರ ಹೊಂದಲು ಉತ್ತೇಜಿಸುವ ಕಾರ್ಯ ನಡೆಯಬೇಕು. ಬಂದಂತಹ ಅನುದಾನವನ್ನು ಜನಪರ ಕಾರ್ಯಗಳಿಗೆ,  ಶಾಶ್ವತ ಕೆಲಸಗಳಿಗೆ ಆದ್ಯತೆ ಮೇರೆಗೆ ವಿನಿಯೋಗಿಸಬೇಕೆಂದು ಪಂಚಾಯಿತಿ ಜನ ಜನಪ್ರತಿನಿಧಿಗಳಿಗೆ ಹಾಗೂ ಅಧಿಕಾರಿಗಳಿಗೆ ಸೂಚಿಸಿದರು.

<><*<><>*><>

ಹೊಸಪೇಟೆಯಲ್ಲಿಂದು ಜಿಲ್ಲಾ ಮಟ್ಟದ ಉದ್ಯೋಗಮೇಳ ನಡೆಯಿತು. ವಿಜಯನಗರ ಕ್ಷೇತ್ರದ ಶಾಸಕ ಹೆಚ್ ಆರ್ ಗವಿಯಪ್ಪ ಜಿಲ್ಲಾ ಉದ್ಯೋಗ ಮೇಳ ಉದ್ಘಾಟಿಸಿ ಮಾತನಾಡಿ, ವಿಜಯನಗರ ಜಿಲ್ಲೆ ಹಲವಾರು ಪ್ರವಾಸಿ ತಾಣಗಳನ್ನು ಹೊಂದಿದ್ದು, ಪ್ರವಾಸೋದ್ಯಮಕ್ಕೆ ಅನುಕೂಲವಾಗುವಂತೆ ಉದ್ಯೋಗ ಸೃಷ್ಟಿಸಲು ವಿಫುಲ ಅವಕಾಶಗಳಿವೆ ಎಂದರು. ಉದ್ಯೋಗ ಮೇಳದಲ್ಲಿ ಜಿಲ್ಲೆಯ ನಾನಾ ಭಾಗದ ೭ ಸಾವಿರದ ೫೦೦ ವಿದ್ಯಾರ್ಥಿಗಳು ನೋಂದಣಿ ಯಾಗಿದ್ದು ೮೦ ವಿವಿಧ ಕಂಪನಿಗಳು ಮೇಳದಲ್ಲಿ ಭಾಗವಹಿಸಿದ್ದವು.

<><*<><>*><>

ಚಿತ್ರದುರ್ಗ ಆಕಾಶವಾಣಿ ಕೇಂದ್ರದಲ್ಲಿ ಇಂದು ರೇಡಿಯೋ ಪ್ರಸಾರದಲ್ಲಿ ವೃತ್ತಿಪರತೆ ಕಾರ್ಯಗಾರ ನಡೆಯಿತು. ೨೫ಕ್ಕೂ ಹೆಚ್ಚು ಸಾಂದರ್ಭಿಕ ಉದ್ಘೋಷಕರು ಹಾಗೂ ಪ್ರಸಾರದಲ್ಲಿ ಸಹಾಯಕರು ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು. ನಿವೃತ್ತ ಹಿರಿಯ ಉದ್ಘೋಷಕಿ ಎಂ.ಎಸ್ ಅನುಪಮಾ ಅವರು ಸಂಪನ್ಮೂಲ ತರಬೇತುದಾರರಾಗಿ ಕಾರ್ಯಗಾರ ನಿರ್ವಹಿಸಿದರು. ನಿಲಯದ ಕಾರ್ಯಕ್ರಮ ಮುಖ್ಯಸ್ಥರಾದ ಎಸ್.ಆರ್.ಭಟ್ ಸೇರಿದಂತೆ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

<><*<><>*><>

ಬಳ್ಳಾರಿಯಲ್ಲಿ ಇಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಮತ್ತು ನಂತರದ ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ವೃತ್ತಿ ಮಾರ್ಗದರ್ಶನ ಕುರಿತು ತರಬೇತಿ ಕಾರ್ಯಾಗಾರ ನಡೆಯಿತು. ಕಾರ್ಯಾಗಾರದ ಉದ್ಘಾಟನೆ ಮಾಡಿದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಹಿರಿಯ ಸಿವಿಲ್ ನ್ಯಾಯಧೀಶ ರಾಜೇಶ್ ಎನ್. ಹೊಸಮನೆ ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಶಾರೀರಿಕ, ಮಾನಸಿಕವಾಗಿ ಸದೃಢರಾಗುವ ಮೂಲಕ ಸತತ ಪರಿಶ್ರಮದಿಂದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಧೈರ್ಯದಿಂದ ಎದುರಿಸಬೇಕು ಎಂದರು. ಉತ್ತಮ ಸೇವೆ ಸಲ್ಲಿಸುವ ಮೂಲಕ ದೇಶಕ್ಕೆ ಕೊಡುಗೆ ನೀಡಬೇಕು ಎಂದರು. ಸಂಪನ್ಮೂಲ ವ್ಯಕಿಗಳು ಸ್ಪರ್ಧಾತ್ಮಕ ಪರೀಕ್ಷೆ ಕುರಿತು ವಿಶೇಷ ಉಪನ್ಯಾಸ ನೀಡಿದರು ಬಳ್ಳಾರಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ತರಬೇತಿ ಕಾರ್ಯಾಗಾರದ ವ್ಯವಸ್ಥೆ ಮಾಡಲಾಗಿತ್ತು.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>